RNU AIR DHARWAD

**FEBRUARY 18, 2025**
**ALL INDIA RADIO- DHARWAD**
**PRADESH SAMACHARA (KANNADA) 12.00 PM**

ಪೌರಾಡಳಿತ ನಿರ್ದೇಶನಾಲಯದ ಸಹಯೋಗದಲ್ಲಿ, ರಾಜ್ಯ ನಗರಾಭಿವೃದ್ಧಿ ಇಲಾಖೆ, ಇಂದಿನಿಂದ 90 ದಿನಗಳವರೆಗೆ, ರಾಜ್ಯಾದ್ಯಂತ ಇ–ಖಾತೆ ಅಭಿಯಾನ ಆಯೋಜಿಸಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ನಗರಾಭಿವೃದ್ಧಿ ಖಾತೆ ಸಚಿವ ಬಿ.ಎಸ್.ಸುರೇಶ, ಪೌರಾಡಳಿತ ಖಾತೆ ಸಚಿವ ರಹೀಂ ಖಾನ್, ಬೆಂಗಳೂರಿನಲ್ಲಿ ಇಂದು, ಅಭಿಯಾನಕ್ಕೆ ಚಾಲನೆ ನೀಡಲಿದ್ದಾರೆ. ಬರುವ ಮೇ 10 ರವರೆಗೆ, ಇ–ಖಾತೆಯನ್ನು ಉಚಿತವಾಗಿ ಮಾಡಿಸಿಕೊಳ್ಳಲು ಸಾರ್ವಜನಿಕರಿಗೆ ಅವಕಾಶ ಕಲ್ಪಿಸಲಾಗಿದೆ.

<><><>

ಕೋಲಾರ ಶಾಸಕ ಕೊತ್ತೂರು ಮಂಜುನಾಥ, ಸುದ್ದಿಗೋಷ್ಠಿ ನಡೆಸಿ, ಸಾರ್ವಜನಿಕರು ಮಧ್ಯವರ್ತಿಗಳಿಲ್ಲದೇ, ನೇರವಾಗಿ ತಮ್ಮ, ತಮ್ಮ ಆಸ್ತಿ ಇ–ಖಾತೆ ಮಾಡಿಸಿಕೊಳ್ಳುವಂತೆ, ಮನವಿ ಮಾಡಿದ್ದಾರೆ.

ಶಾಸಕ ಕೊತ್ತೂರು ಮಂಜುನಾಥ ಧ್ವನಿ– 23 ಸೆಕೆಂದುಗಳು

<><><>

ಸ್ಥಳೀಯ ಹಂತದಲ್ಲಿ, ಸೌರಶಕ್ತಿ ಮತ್ತು ಪವನ ಶಕ್ತಿ ಮೂಲಕ, ವಿದ್ಯುತ್ ಉತ್ಪಾದನೆಗೆ ಒತ್ತು ನೀಡಿ, ವಿದ್ಯುತ್ ಕೊರತೆ ನೀಗಿಸಲು ಪ್ರಯತ್ನಿಸಲಾಗುತ್ತಿದೆ. ಇದಕ್ಕೆ ಸ್ಥಳೀಯರ ಸಹಕಾರ ಅಗತ್ಯ ಎಂದು, ಇಂಧನ ಖಾತೆ ಸಚಿವ ಕೆ.ಜೆ. ಜಾರ್ಜ್, ಹೇಳಿದ್ದಾರೆ. ಹಾವೇರಿ ಜಿಲ್ಲೆ, ಬ್ಯಾಡಗಿ ತಾಲೂಕಿನ, ಚಿಕ್ಕಬಾಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸೌರ ವಿದ್ಯುತ್ ಮತ್ತು ಪವನ ಶಕ್ತಿ ಸ್ಥಾವರ ಸ್ಥಾಪನೆಗೆ, ಭೂಮಿ ನೀಡುವ ರೈತರಿಗೆ, ಪ್ರತಿ ಎಕರೆಗೆ 25 ಸಾವಿರ ಸಹಾಯ ಧನ ನೀಡಲಾಗುವುದು ಎಂದರು. ರೈತರ ಜಮೀನುಗಳಿಗೆ, ನಿತ್ಯ 7 ಗಂಟೆ ಥ್ರೀ ಫೇಸ್ ವಿದ್ಯುತ್ ಪೂರೈಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಕಂಬ ಹಾಗೂ ತಂತಿ ಅಳವಡಿಕೆ ಕಾರ್ಯ ಪ್ರಗತಿಯಲ್ಲಿದೆ ಎಂದು ಅವರು ಹೇಳಿದರು.

<><><>

ಕರ್ನಾಟಕ ಮಾಧ್ಯಮ ಅಕಾದೆಮಿಯ ಡಿಜಿಟಲಿಕರಣಕ್ಕೆ, ಚಿಂತನೆ ನಡೆದಿದೆ ಎಂದು, ಅಧ್ಯಕ್ಷೆ ಆಯೇಷಾ ಖಾನಂ, ತಿಳಿಸಿದ್ದಾರೆ. ಕಲಬುರಗಿಯ ಶರಣಬಸವ ವಿಶ್ವವಿದ್ಯಾಲಯದಲ್ಲಿ ಆಯೋಜಿತ, ಎರಡು ದಿನಗಳ, ಕಲ್ಯಾಣ ಕರ್ನಾಟಕ ಮೀಡಿಯಾ ಹಬ್ಬ, ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ವಿಶ್ವಕ್ಕೆ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಸಾರಿದ, ಕಲ್ಯಾಣ ಕರ್ನಾಟಕದ, ಕಲಬುರಗಿ ನೆಲದಲ್ಲಿ, ಮಾಧ್ಯಮ ಅಕಾದೆಮಿ ಪ್ರಥಮ ಬಾರಿಗೆ, ಮೀಡಿಯಾ ಫೆಸ್ಟ್

ಆಯೋಜಿಸಿದೆ. ಉತ್ಸವದಲ್ಲಿ ಗ್ರಾಮೀಣ ಭಾಗದ ಪತ್ರಕರ್ತರಿಗೆ ವೃತ್ತಿ ಕೌಶಲ ಹೆಚ್ಚಿಸಲು, ತರಬೇತಿ ಶಿಬಿರ ಹಾಗೂ ಸಣ್ಣ ಪತ್ರಿಕೆಗಳ ಬೆಳವಣಿಗೆ ಕುರಿತು, ಚಿಂತನೆ ನಡೆಸಲಾಗುತ್ತಿದೆ ಎಂದು, ತಮ್ಮ ಆಶಯ ಭಾ ಣದಲ್ಲಿ, ಅವರು ಹೇಳಿದರು.

<><><>

ಸೃಜನಶೀಲತೆ ಯಾವಾಗಲೂ ಪ್ರಜಾಸತ್ತಾತ್ಮಕ ಚಿಂತನೆ, ಪ್ರಜಾಪ್ರಭುತ್ವದ ಮೌಲ್ಯಗಳು ಜಾಗೃತವಾಗಿರುವಂತೆ, ಎಚ್ಚರ ವಹಿಸುತ್ತದೆ ಎಂದು, ಚಿಂತಕ ಪ್ರೊಫೆಸರ್ ಬರಗೂರು ರಾಮಚಂದ್ರಪ್ಪ ಹೇಳಿದ್ದಾರೆ. ಗುಲಬರ್ಗಾ ವಿಶ್ವವಿದ್ಯಾಲಯದ ಮಹಾತ್ಮ ಗಾಂಧಿ ಸಭಾಂಗಣದಲ್ಲಿ, 'ಕನ್ನಡ ಭಾ ಾಭಿವೃದ್ಧಿ ಯೋಜನೆಯಡಿ ಆಯೋಜಿಸ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಲೋಕಾಂತ ಮತ್ತು ಏಕಾಂತವನ್ನು ಪ್ರತಿನಿಧಿಸುವ ದೇಹ, ಪ್ರಜಾಸತ್ತಾತ್ಮಕತೆಯ ಸ್ವರೂಪವಾಗಿದೆ. ವಿವೇಕದ ಸ್ಥಾನದಲ್ಲಿ ಉದ್ವೇಗ, ಮಾನವೀಯತೆಯ ಜಾಗೆಯಲ್ಲಿ ಮತೀಯತೆ ಆಕ್ರಮಿಸಿಕೊಳ್ಳದಂತೆ, ಸೃಜನಶೀಲತೆ ಕಾಪಾಡುತ್ತದೆ ಎಂದರು.

<><><>

ಸಾಮಾಜಿಕ ಆಂದೋಲನ ಅಭಿಯಾನದಡಿ, ಕಲಬುರಗಿ ಜಿಲ್ಲೆಯಾದ್ಯಂತ, ಸ್ವ ಸಹಾಯ ಸಂಘದಿಂದ ಹೊರಗುಳಿದ ಕುಟುಂಬಗಳ 70 ಸಾವಿರ ಮಹಿಳಾ ಸದಸ್ಯರನ್ನು, ಸ್ವ ಸಹಾಯ ಸಂಘದಲ್ಲಿ ಸೇರ್ಪಡೆಗೆ, ಕ್ರಮ ಕೈಗೊಳ್ಳಲಾಗಿದೆ ಎಂದು, ಜಿಲ್ಲಾ ಪಂಚಾಯಿತಿ ಸಿ.ಇ.ಒ. ಭಂವರ್‌ಸಿಂಗ್ ಮೀನಾ ತಿಳಿಸಿದ್ದಾರೆ. ಉದ್ಯಮಶೀಲತೆ ಮತ್ತು ಜೀವನೋಪಾಯ ಖಾತೆ ಸಚಿವ, ಶರಣಪ್ರಕಾಶ ಪಾಟೀಲ ಅಧ್ಯಕ್ಷತೆಯಲ್ಲಿ, ಕಲಬುರಗಿಯ ಐವಾನ್ ಶಾಹಿ ಅತಿಥಿ ಗೃಹದಲ್ಲಿ ನಡೆದ, ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಎನ್.ಆರ್.ಎಲ್.ಎಮ್. ಯೋಜನೆಯಡಿ, ಸ್ವ ಸಹಾಯ ಸಂಘಗಳಿಗೆ, ಬ್ಯಾಂಕ್ ಲಿಂಕೇಜ್ ಮೂಲಕ, 25 ಕೋಟಿ ರೂಪಾಯಿ ಸಾಲ ಸೌಲಭ್ಯ ಒದಗಿಸಲಾಗಿದೆ. ಕೃಷಿ ಮತ್ತು ಕೃಷಿಯೇತರ ಜೀವನೋಪಾಯ ಚಟುವಟಿಕೆ ಪ್ರೋತ್ಸಾಹಿಸಲಾಗಿದೆ ಎಂದರು.

<><><>

ಪರಿಶಿ ್ಟ ಜಾತಿ ಮತ್ತು ಪರಿಶಿ ್ಟ ಪಂಗಡದ ಉಪಹಂಚಿಕೆ ಯೋಜನೆಯಡಿ ಅನು ್ಠಾನಿತ ಕಾಮಗಾರಿಗಳ ಆರ್ಥಿಕ ಹಾಗೂ ಭೌತಿಕ ಗುರಿಯನ್ನು ನಿಗದಿತ ಕಾಲಮಿತಿಯಲ್ಲಿಯೇ ಸಾಧಿಸಬೇಕು ಎಂದು ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಸೂಚಿಸಿದ್ದಾರೆ. ಗದಗ ಜಿಲ್ಲಾಡಳಿತ ಭವನದ ಕಚೇರಿ ಸಭಾಂಗಣದಲ್ಲಿ ಜರುಗಿದ ಎಸ್.ಸಿ.ಎಸ್.ಪಿ. ಹಾಗೂ ಟಿ.ಎಸ್.ಪಿ. ಯೋಜನೆಯಡಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅರ್ಹ ಫಲಾನುಭವಿಗಳ ಆಯ್ಕೆಯಲ್ಲಿ ಪಾರದರ್ಶಕತೆಯಿರಬೇಕು. ವಿಳಂಬ ಧೋರಣೆ ಇರಬಾರದು. ಆಯಾ ಆರ್ಥಿಕ ಸಾಲಿನಲ್ಲಿ ಅನು ್ಠಾನಿತ ಕಾಮಗಾರಿಗಳನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸುವತ್ತ ಇಲಾಖೆಯ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಸೂಚಿಸಿದರು.

<><><>

ಪ್ರತಿಯೊಬ್ಬರು ಸ್ವಾಭಿಮಾನಿ, ಗೌರವಯುತ ಮತ್ತು ಘನತೆಯ ಬದುಕು ನಡೆಸಲು ಅಂಬೇಡ್ಕರ್ ಅವರ ಸಾಮಾಜಿಕ ನ್ಯಾಯದ ಪರಿಕಲ್ಪನೆ ಪ್ರೇರಣೆ ನೀಡಿತು ಎಂದು, ಶಿವರಾಮ ಕಾರಂತ ಟ್ರಸ್ಟ್ ಅಧ್ಯಕ್ಷ ಗಣನಾಥ ಶೆಟ್ಟಿ ಎಕ್ಕಾರು ಹೇಳಿದ್ದಾರೆ.

ಉಡುಪಿಯ ಬಾರ್ಕೂರಿನ, ಶ್ರೀಮತಿ ರುಕ್ಮಿಣಿ ಶೆಡ್ತಿ ಸ್ಮಾರಕ, ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ, 'ಅಂಬೇಡ್ಕರ್ ಓದು' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ..

<><><>